# ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 1122 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:09.03.2018

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿನ ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಸ್ವತ್ತು ತಂತ್ರಾಂಶದಲ್ಲಿ ಸರ್ಕಾರಿ ಆಸ್ತಿ ಕೋಷ್ಟಕದಲ್ಲಿ ಸೇರಿಸಿ ಅನಧಿಕೃತ ಮಾರಾಟವನ್ನು ತಡೆಯುವ ಕುರಿತು.

**ಉಲ್ಲೇಖ:** ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ರವರ ಪಸ್ತಾವನೆ ಸಂಖ್ಯೆ:MWD/152/ WES/2017(ಭಾಗ-1), ದಿನಾಂಕ:27.09.2017

***

ಉಲ್ಲೇಖಿತ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯ ಪ್ರಸ್ತಾವನೆಯಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಎಲ್ಲಾ ವಕ್ಫ್ ಆಸ್ತಿಗಳನ್ನು ಅನಧಿಕೃತವಾಗಿ ಮಾರಾಟವಾಗದಂತೆ ತಡೆಯುವ ಉದ್ದೇಶದಿಂದ ಇ-ಸ್ವತ್ತು ತಂತ್ರಾಂಶದಲ್ಲಿ ಸರ್ಕಾರಿ ಆಸ್ತಿ ಎಂದು ಅಳವಡಿಸಲು ಕೋರಿರುತ್ತಾರೆ. ವಕ್ಫ್ ಆಸ್ತಿಗಳು ಮುಸ್ಲಿಂ ಸಮುದಾಯದ ಧಾರ್ಮಿಕ ಹಾಗೂ ಆರ್ಥಿಕ ಉದ್ದೇಶಗಳಿಗೆ ಶಾಶ್ವತವಾಗಿ ಮುಡುಪಾಗಿರುವುದರಿಂದ ವಕ್ಫ್ ಕಾಯ್ದೆ ಅನುಸಾರ ಅವುಗಳ ಮಾರಾಟ, ದಾನ, ವರ್ಗಾವಣೆ, ಅಡಮಾನ ಅಥವಾ ವಿನಿಮಯ ಮಾಡುವುದು ಹಿಂದಿನಿಂದಲೂ ಜಾರಿಯಲ್ಲಿರುತ್ತದೆ(*Ab initio*). ವಕ್ಫ್ ಆಸ್ತಿಗಳಲ್ಲಿ ಒಂದು (1) ವರ್ಷಕ್ಕೆ ಮೇಲ್ಪಟ್ಟು ಗರಿಷ್ಠ ಮೂವತ್ತು (30) ವರ್ಷಗಳ ರವರೆಗೆ ಗುತ್ತಿಗೆ ನೋಂದಾಯಿಸುವ ಅವಕಾಶ ಮಾತ್ರ ಇರುತ್ತದೆ.

ರಾಜ್ಯದಲ್ಲಿ ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳನ್ನು ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿ ಸರ್ಕಾರಿ ಆಸ್ತಿಗಳ ಕೋಷ್ಟಕದಲ್ಲಿ ನಮೂದಿಸಿ, ಮಾಲಿಕರ ಕೋಷ್ಟಕದಲ್ಲಿ ವಕ್ಫ್ ಸಂಸ್ಥೆಯ ಹೆಸರನ್ನು ನಮೂದಿಸಲು ಹಾಗೂ ಇತರೆ ಹಕ್ಕು ಬಾಧ್ಯತೆಗಳ ಕೋಷ್ಟಕದಲ್ಲಿ 'ವಕ್ಫ್ ಆಸ್ತಿ' ಎಂಬುದಾಗಿ ನಮೂದಿಸಿ ಶಾಶ್ವತವಾಗಿ ಸಂರಕ್ಷಿಸುವುದು ಕೇಂದ್ರ ಸರ್ಕಾರದ ವಕ್ಫ್ ಕಾಯ್ದೆ, 1995ರ ಅವಕಾಶಗಳನ್ನು ಅನುಷ್ಠಾನಗೊಳಿಸಿ ಸಂರಕ್ಷಿಸುವುದು ಅಗತ್ಯವೆಂದು ಭಾವಿಸಲಾಗಿದೆ.

ಈ ಪ್ರಸ್ತಾವನೆಯನ್ನು ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಸಂಬಂಧಿಸಿದ ಸಚಿವ ಸಂಪುಟದ ಉಪ-ಸಮಿತಿಯ ಸಭೆಯಲ್ಲಿ ಕೂಲಂಕುಶವಾಗಿ ಚರ್ಚಿಸಲಾಗಿರುತ್ತದೆ. ದಿನಾಂಕ:30.01.2018 ರಂದು ನಡೆದ ಸಭಾ ನಡವಳಿಯ ಪ್ರಕಾರ ವಕ್ಫ್ ಆಸ್ತಿಗಳನ್ನು ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಲು ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯು ಕೋರಿರುತ್ತದೆ.

ಮೇಲಿನ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳನ್ನು ಇ-ಸ್ವತ್ತು ತಂತ್ರಾಂಶದಲ್ಲಿ ಅಳವಡಿಸಿ ಸರ್ಕಾರಿ ಆಸ್ತಿಗಳ ಕೋಷ್ಟಕದಲ್ಲಿ ನಮೂದಿಸಿ, ಮಾಲೀಕರ ಕೋಷ್ಟಕದಲ್ಲಿ ವಕ್ಫ್ ಸಂಸ್ಥೆಯ ಹೆಸರನ್ನು ನಮೂದಿಸಲು ಹಾಗೂ ಇತರೆ ಹಕ್ಕು ಬಾಧ್ಯತೆಗಳ ಕೋಷ್ಟಕದಲ್ಲಿ 'ವಕ್ಫ್ ಆಸ್ತಿ' ಎಂಬುದಾಗಿ ನಮೂದಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸೂಚಿಸಿದೆ. ಈ ತಂತ್ರಾಂಶದಲ್ಲಿ ಅಳವಡಿಸಲಾಗಿರುವ ವಕ್ಫ್ ಆಸ್ತಿಗಳನ್ನು ರಾಜ್ಯದ ನೋಂದಣಾಧಿಕಾರಿಗಳು ಮಾರಾಟ, ದಾನ, ವರ್ಗಾವಣೆ, ಅಡಮಾನ ಅಥವಾ ವಿನಿಮಯ ಮಾಡಲು

. .. ..2

ಅವಕಾಶವಿರುವುದಿಲ್ಲ. ಒಂದು (1) ವರ್ಷಕ್ಕೆ ಮೇಲ್ಪಟ್ಟು ಗರಿಷ್ಠ ಮೂವತ್ತು (30) ವರ್ಷಗಳ ರವರೆಗೆ ಗುತ್ತಿಗೆ ನೊಂದಾಯಿಸುವ ಅವಕಾಶ ಮಾತ್ರ ಇರುತ್ತದೆ ಎಂಬ ಷರತ್ತು ವಿಧಿಸಿದೆ. ಮೇಲಿನ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿದೆ.

9/3/18

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು.
6) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾಮಟ್ಟದ ವಕ್ಫ್ ಆಸ್ತಿಗಳ ಕಾರ್ಯಪಡೆ.
7) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು (ಎಲ್ಲಾ ಜಿಲ್ಲಾ ವಕ್ಫ್ ಅಧಿಕಾರಿಗಳಿಗೆ ಪ್ರತಿ ಸಲ್ಲಿಸುವುದು).
9) ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು ರವರು ಈ ಸಂಬಂಧ ಇ-ಸ್ವತ್ತು ತಂತ್ರಾಂಶದಲ್ಲಿ ಸೂಕ್ತ ಮಾರ್ಪಾಟು ಮಾಡಲು ಕೋರಿದೆ.
10) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
11) ಎಲ್ಲಾ ಜಿಲ್ಲಾ ನೋಂದಣಾಧಿಕಾರಿಗಳು/ಉಪನೋಂದಣಾಧಿಕಾರಿಗಳು (ಐಜಿಆರ್ ರವರ ಮುಖಾಂತರ).
12) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.
13) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
14) ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
15) ಹೆಚ್ಚುವರಿ ಪ್ರತಿ / ಶಾಖಾ ರಕ್ಷಾ ಕಡತ.